ಐ.ಟಿ.ಐ. ಕಾಲೇಜು ಸ್ಥಾಪಿಸುವುದು

971(1920); ಶ್ರೀ ಗುರು ಪಾಟೀಲ್ ಶಿರವಾಳ (ಶಹಾಪುರ)

ಅ) ಯಾದಗಿರಿ ಜಿಲ್ಲೆಯ ಶಹಾಪುರ ಪಟ್ಟಣ ಪ್ರದೇಶದಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರ (ಐಟಿಐ) ಕಾಲೇಜು ಇಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಪಟ್ಟಣದಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರ (ಐಟಿಐ) ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಇದು ಯಾವ ಹಂತದಲ್ಲಿದೆ? ಈ ಕಾಲೇಜನ್ನು ಪ್ರಾರಂಭಿಸಲು ಅಗತ್ಯವಾದ ಸ್ಥಳಾವಕಾಶ ಇದ್ದರೂ ವಿಳಂಬವಾಗಲು ಕಾರಣಗಳೇನು? (ವಿವರವನ್ನು ಒದಗಿಸುವುದು)

ಶ್ರೀ ಪಿ.ಟಿ. ಪರಮೇಶ್ವರ್ ನಾಯ್ಕ್ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಯಾದಗಿರಿ ಜಿಲ್ಲೆಯ ಯಾದಗಿರಿ ಮತ್ತು ಸೈದಾಪುರ ಸೇರಿದಂತೆ 2014–15ನೇ ಸಾಲಿನಲ್ಲಿ ಈಗಾಗಲೇ ಪ್ರಾರಂಭಿಸಲಾಗಿದೆ.

100 ಹೊಸ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಹುದ್ದೆಗಳ ಸೃಜನೆಯಾಗಬೇಕಿದ್ದು, ಹಾಗೂ ಯಂತ್ರೋಪಕರಣ, ಪೀಠೋಪಕರಣ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಪ್ರಥಮ ಆದ್ಯತೆಯಾಗಿರುತ್ತದೆ.

ಅದುದರಿಂದ ಸದ್ಯಕ್ಕೆ ಹೊಸ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಯಾದಗಿರಿ ಜಿಲ್ಲೆಯಲ್ಲಿ ಪ್ರಸ್ತುತ 3 ಸರ್ಕಾರಿ, 2 ಅನುದಾನಿತ ಹಾಗೂ 23 ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಈ ಮೂಲಕ ಆ ಭಾಗದ ಯುವಜನರಿಗೆ ಕೌಶಲ್ಯ ತರಬೇತಿಯನ್ನು ಪಡೆಯುವ ಅವಕಾಶವನ್ನು ಕಲ್ಪಿಸಿ ಉದ್ಯೋಗವಕಾಶಗಳನ್ನು ಹೆಚ್ಚಿಸಲು ಹಾಗೂ ಸ್ವಯಂ ಉದ್ಯೋಗಗಳನ್ನು ಕೈಗೊಳ್ಳಲು ನೆರವಾಗುತ್ತಿವೆ.

ನಬಾರ್ಡ ಯೋಜನೆಯಡಿಯಲ್ಲಿ ಪೂರ್ಣಗೊಂಡಿರುವ ಕೆರೆ ಕಾಮಗಾರಿ

972(1956); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ,

ಅ) ಬೀದರ ತಾಲ್ಲೂಕಿನಲ್ಲಿ ಬರುವ ಆಷ್ಟೂರ್ ಹೊಸ ಕೆರೆ ಕಾಮಗಾರಿಯನ್ನು ನಬಾರ್ಡ್ ಯೋಜನೆಯಲ್ಲಿ ಪೂರ್ಣಗೊಳಿಸಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರ ಹೆಸರು ಹಾಗೂ ವಿವರಗಳೇನು;

ಇ) ಈ ಕಾಮಗಾರಿಯನ್ನು ನಿಗದಿತ ಅವಧಿಗಿಂತ ಮುನ್ನವೇ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿರುವುದು ನಿಜವೇ;

ಈ) ಹಾಗಿದ್ದಲ್ಲಿ, ಇದಕ್ಕಾಗಿ ಮುಖ್ಯ ಅಭಿಯಂತರರು, ಸಣ್ಣ ನೀರಾವರಿ (ಉತ್ತರ ವಲಯ) ಬಿಜಾಪುರ ಇವರು ಸಂಬಂಧಪಟ್ಟ ಗುತ್ತಿಗೆದಾರರಿಗೆ ಪ್ರಶಂಸಾ ಪತ್ರವನ್ನು ನೀಡುವ ಮೂಲಕ ಅಭಿನಂದಿಸಿರುವುದು ನಿಜವಲ್ಲವೆ?

ಶ್ರೀ ಶಿವರಾಜ ಎಸ್. ತಂಗಡಗಿ (ಮಾನ್ಯ ಸಣ್ಣ ನೀರಾವರಿ ಸಚಿವರು)

ಅ) ಹೌದು.